**ಕರ್ನಾಟಕ ಸರ್ಕಾರ**

ಸಂಖ್ಯೆ:ಆರ್‌ಡಿಪಿಆರ್/42/ಎಯುಡಿ/2023

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:-16-01-2024.

**ಸುತ್ತೋಲೆ**

ವಿಷಯ: 2014-15 ರಿಂದ ಪ್ರಸ್ತುತ ಸಾಲಿನ ಗ್ರಾಮ ಪಂಚಾಯತಿಗಳ ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆಗಳು ಮತ್ತು ವಸೂಲಾತಿ ಕಂಡಿಕೆಗಳ ತೀರುವಳಿಗಾಗಿ ಕ್ರಮ ಕೈಗೊಳ್ಳುವ ಬಗ್ಗೆ.

ಉಲ್ಲೇಖ:
1. ದಿನಾಂಕ: 04.01.2024 ರಂದು ನಡೆದ ಕರ್ನಾಟಕ ವಿಧಾನಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂ.ರಾಜ್ ಸಂಸ್ಥೆಗಳ ಸಮಿತಿ ಸಭೆ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧಿಕೃತ ಜ್ಞಾಪನ ಸಂ:ಗ್ರಾಅಪ: 18/ಎಎಆರ್/2020 ,ದಿನಾಂಕ:-06-11-2023

******

2014-15ನೇ ಸಾಲಿನ ಗ್ರಾಮ ಪಂಚಾಯತಿಗಳ ಲೆಕ್ಕ ಪರಿಶೋಧನಾ ವರದಿಯ ಆಡಿಟ್ ಕಂಡಿಕೆಗಳ ಕುರಿತು ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂ.ರಾಜ್ ಸಂಸ್ಥೆಗಳ ಸಮಿತಿಯು ದಿನಾಂಕ: 04.01.2024 ರಂದು ಸಭೆ ನಡೆಸಿದ ಸಂದರ್ಭದಲ್ಲಿ 2014-15ನೇ ಸಾಲಿನ ಆಕ್ಷೇಪಣೆ ಮತ್ತು ವಸೂಲಾತಿ ಕಂಡಿಕೆಗಳು ಇಲ್ಲಿಯವರೆಗೂ ತೀರುವಳಿಯಾಗದೇ ಬಾಕಿ ಉಳಿದಿರುವ ಬಗ್ಗೆ ತೀವ್ರ ಅಸಮಾಧಾನ ಹಾಗೂ ಆಕ್ಷೇಪ ವ್ಯಕ್ತಪಡಿಸಲಾಗಿದ್ದು, ಇಲಾಖೆಗೆ ಗ್ರಾಮ ಪಂಚಾಯಿತಿಗಳ ಲೆಕ್ಕ ಪರಿಶೋಧನಾ ವರದಿಯ ಕಂಡಿಕೆಗಳ ತೀರುವಳಿಗೆ ಕ್ರಮ ಕೈಗೊಂಡು ಸಮಿತಿಗೆ ವರದಿ ಸಲ್ಲಿಸುವಂತೆ ಸೂಚಿಸಿರುತ್ತದೆ.

ಈ ಹಿನ್ನೆಲೆಯಲ್ಲಿ ಸದರಿ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ, ರಾಜ್ಯದ ಎಲ್ಲಾ ಜಿಲ್ಲೆಗಳ ಗ್ರಾಮ ಪಂಚಾಯಿತಿಗಳ ಲೆಕ್ಕ ಪರಿಶೋಧನಾ ವರದಿಗಳಲ್ಲಿನ ಆಕ್ಷೇಪಣೆ ಮತ್ತು ವಸೂಲಾತಿ ಕಂಡಿಕೆಗಳ ತೀರುವಳಿಗೆ ನಿಯಮಾನುಸಾರ ಕ್ರಮ ಜರುಗಿಸಲು **"100 ದಿನಗಳ ಗ್ರಾಮ ಪಂಚಾಯಿತಿಗಳ ಲೆಕ್ಕ ಪರಿಶೋಧನಾ ಅಭಿಯಾನ"** ವನ್ನು ಕೈಗೊಳ್ಳಲು ತಿಳಿಸಲಾಗಿರುತ್ತದೆ.

**....2)**

ಮುಂದುವರೆದು, 2014-15 ರಿಂದ ಪ್ರಸ್ತುತ ಸಾಲಿನ ಗ್ರಾಮ ಪಂಚಾಯತಿಗಳ ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆಗಳು ಮತ್ತು ವಸೂಲಾತಿ ಕಂಡಿಕೆಗಳ ತೀರುವಳಿಗಾಗಿ ಗೌರವಾನ್ವಿತ ಸಮಿತಿಯು ಸೂಚಿಸಿರುವಂತೆ, ಹಣ ದುರುಪಯೋಗವಾಗಿರುವ ಅಥವಾ ಶಂಕಿಸಿರುವ ಕಂಡಿಕೆಗಳನ್ನು ದಿನಾಂಕ:31-01-2024ರೊಳಗಾಗಿ ಸಂಪೂರ್ಣವಾಗಿ ತೀರುವಳಿಗೊಳಿಸಲು ಕ್ರಮವಹಿಸುವುದು.

ಇಲ್ಲವಾದಲ್ಲಿ ಸಂಬಂಧಪಟ್ಟ ಕಾರ್ಯನಿರ್ವಾಹಕ ಅಧಿಕಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕರ ವಸೂಲಿಗಾರರ ವಿರುದ್ಧ ಹಾಗೂ ಹಣ ದುರುಪಯೋಗವಾಗಿರುವುದು ದೃಢಪಟ್ಟಿದ್ದರೂ ಸಹ , ಸಂಬಂಧಪಟ್ಟ ವ್ಯಕ್ತಿಗಳು ಸಾವನ್ನಪ್ಪಿದಲ್ಲಿ/ ನಿವೃತ್ತಿ ಹೊಂದಿದ್ದಲ್ಲಿ, ಸದರಿಯವರಿಗೆ ನಿರಾಕ್ಷೇಪಣಾ ದೃಢೀಕರಣ ಪತ್ರ (NOC) ನೀಡಿರುವ ಕಾರ್ಯನಿರ್ವಹಕ ಅಧಿಕಾರಿ ರವರ ವಿರುದ್ಧ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರವರು ಶಿಸ್ತು ಕ್ರಮ ಜರುಗಿಸಲು ಈ ಮೂಲಕ ಸೂಚಿಸಲಾಗಿದೆ.

**(ಉಮಾ ಮಹಾದೇವನ್)**
**ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್)**
**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ**

**ಗೆ,**

ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.

**ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ**:

ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್), ಗ್ರಾ.ಅ & ಪಂ.ರಾಜ್ ಇಲಾಖೆ ರವರ ಆಪ್ತ ಶಾಖೆಗೆ.
2. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
3. ಪ್ರಧಾನ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಬೆಂಗಳೂರು.
4. ಶಾಖಾಧಿಕಾರಿ (ಇ-ಆಡಳಿತ), ಗ್ರಾ.ಅ & ಪಂ.ರಾಜ್ ಇಲಾಖೆ-ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
5. ಸಮಾಲೋಚಕರು, ಕರ್ನಾಟಕ ಇನ್ಸ್ಟಿಟ್ಯೂಟ್ಸ್ ಆಫ್ ಪಬ್ಲಿಕ್ ಆಡಿಟರ್ಸ್, ಬೆಂಗಳೂರು.
6. ಕಛೇರಿ ಪ್ರತಿ.